ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು -೫೦

**ಪಟ್ಟಿ - ೨೬**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಸೋಮವಾರ, ದಿನಾಂಕ : ೨೮ನೇ ಜುಲೈ, ೨೦೧೪**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಹಿಮೋಫಿಲಿಯ ಖಾಯಿಲೆಯ ಗಂಭೀರತೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೬೫೨ (೨೦೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಮೋಫಿಲಿಯ ಖಾಯಿಲೆಯ ಗಂಭೀರತೆಗಳೇನು ; ಈ ಖಾಯಿಲೆ ಕಾಣಿಸಿಕೊಳ್ಳಲು ಕಾರಣಗಳೇನು ; ರಾಜ್ಯದಲ್ಲಿ ಸುಮಾರು ಎಷ್ಟು ಜನರಿಗೆ ಈ ಖಾಯಿಲೆಯಿದೆ ;

(ಆ) ಇದರ ಚಿಕಿತ್ಸೆಯ ಸ್ವರೂಪವೇನು ; ಒಬ್ಬ ರೋಗಿಗೆ ಒಂದು ತಿಂಗಳಿಗೆ ಅಂದಾಜು ಎಷ್ಟು ಹಣ ಖರ್ಚಾಗುತ್ತದೆ ;

(ಇ) ಪ್ರಸ್ತುತ ಈ ಖಾಯಿಲೆಯ ಔಷಧಿ ಕೊರತೆ ಇರುವುದು ನಿಜವೇ ; ಕೊರತೆಯನ್ನು ನಿವಾರಿಸಲು ಏನು ಕ್ರಮ ಕೈಗೊಳ್ಳಲಾಗಿದೆ ?

## ಇಲಿ ಜ್ವರಕ್ಕೆ ಔಷಧಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೬೫೩ (೨೦೬೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇಲಿ ಜ್ವರವನ್ನು ಕುರಿತು ಸಂಪೂರ್ಣ ವಿವರ ನೀಡುವುದು ;

(ಆ) ರಾಜ್ಯದಲ್ಲಿ ಈ ಜ್ವರವು ಕಾಣಿಸಿಕೊಂಡಿದೆಯೇ (ವಿವರ ನೀಡುವುದು) ;

(ಇ) ಈ ಜ್ವರಕ್ಕೆ ಯಾವುದಾದರೂ ಔಷಧಗಳಿವೆಯೇ; (ವಿವರ ನೀಡುವುದು)

(ಈ) ಪ್ರಸ್ತುತ ಈ ಖಾಯಿಲೆಗೆ ಯಾವ ರೀತಿಯ ಚಿಕಿತ್ಸೆಯನ್ನು ಸರ್ಕಾರಿ ಆಸ್ಪತ್ರೆಗಳಲ್ಲಿ ನೀಡಲಾಗುತ್ತಿದೆ ?

## ಡೆಂಗ್ಯೂ ಜ್ವರಕ್ಕೆ ಗುರಿಯಾದ ಜನರು

**ಶ್ರೀ ಎ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೧೬೫೪ (೨೦೭೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ವರ್ಷಗಳಲ್ಲಿ ರಾಜ್ಯದಲ್ಲಿ ಡೆಂಗ್ಯೂ ಜ್ವರಕ್ಕೆ ಗುರಿಯಾದ ಜನರು ಎಷ್ಟು ; ಅವರಲ್ಲಿ ಎಷ್ಟು ಜನರು ಸಾವನ್ನಪ್ಪಿದ್ದಾರೆ ; ಎಷ್ಟು ಜನ ಗುಣಮುಖರಾಗಿದ್ದಾರೆ ; ಅವರುಗಳಿಗೆ ಯಾವ ಯಾವ ಆಸ್ಪತ್ರೆಗಳಲ್ಲಿ ಚಿಕಿತ್ಸೆಯನ್ನು ನೀಡಲಾಗಿದೆ (ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಆ) ಡೆಂಗ್ಯೂ ಜ್ವರ ಬರಲು ಕಾರಣವೇನು ; ಡೆಂಗ್ಯೂ ಜ್ವರಕ್ಕೆ ನೀಡಲಾಗುವ ಚಿಕಿತ್ಸೆಗಳೇನು ; ಅಂತಹ ಚಿಕಿತ್ಸೆಗಳಿಗೆ ಸರ್ಕಾರದ ಆಸ್ಪತ್ರೆಗಳಲ್ಲಿ ಹಾಗೂ ಖಾಸಗಿ ಆಸ್ಪತ್ರೆಗಳಿಗೆ ಮತ್ತು ನರ್ಸಿಂಗ್ ಹೋಮ್‌ಗಳಲ್ಲಿ ತಗಲುವ ವೆಚ್ಚವನ್ನು ತಾಲ್ಲೂಕುವಾರು ವಿವರಗಳನ್ನು ನೀಡುವುದು ;

(ಇ) ದುಬಾರಿಯಾದ ಚಿಕಿತ್ಸೆಯ ವೆಚ್ಚವನ್ನು ನಿಯಂತ್ರಿಸುವಂತಹ ಯಾವುದಾದರೂ ಕ್ರಮವನ್ನು ಸರ್ಕಾರ ತೆಗೆದುಕೊಂಡಿದೆಯೇ (ಹಾಗಿದ್ದಲ್ಲಿ ವಿವರ ನೀಡುವುದು) ?

## ಶ್ರೀ ಕೃಷ್ಣ ಜಯಂತಿ ಆಚರಣೆ

**ಶ್ರೀಮತಿ ಜಯಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೬೫೫ (೨೧೩೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶ್ರೀ ಕೃಷ್ಣ ಜಯಂತಿಯನ್ನು ರಾಜ್ಯಾದ್ಯಂತ ಆಚರಣೆ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರಿ ಆದೇಶವನ್ನು ಯಾವಾಗ ಹೊರಡಿಸಲಾಗುವುದು ;

(ಇ) ಈ ಬಗ್ಗೆ ಈವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು) ?

## ಗೊಲ್ಲರ ಹಟ್ಟಿಗಳ ಅಭಿವೃದ್ಧಿ ಯೋಜನೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೫೬ (೨೦೭೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಗೊಲ್ಲರಹಟ್ಟಿಗಳ ಅಭಿವೃದ್ಧಿ ಯೋಜನೆಗೆ ಮೀಸಲಿಟ್ಟಿರುವ ಅನುದಾನ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ಈವರೆಗೆ ಈ ಯೋಜನೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಇ) ಗೊಲ್ಲರ ಹಟ್ಟಿಗಳ ಅಭಿವೃದ್ಧಿ ಯೋಜನೆಯಡಿ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ?

## ಆಸ್ಪತ್ರೆಗಳಲ್ಲಿ " ರಕ್ತ ತಪಾಸಣೆ " ಪ್ರಯೋಗಾಲಯಗಳು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೫೭ (೨೦೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿಜಾಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ಎಷ್ಟು ತಾಲ್ಲೂಕು ಆಸ್ಪತ್ರೆಗಳಲ್ಲಿ " ರಕ್ತ ತಪಾಸಣೆ " ಪ್ರಯೋಗಾಲಯಗಳಿವೆ (ತಾಲ್ಲೂಕುವಾರು ವಿವರಣೆ ನೀಡುವುದು) ; ಅವುಗಳಲ್ಲಿ ನುರಿತ ತಂತ್ರಜ್ಞರು ಇದ್ದಾರೆಯೇ ;

(ಆ) ಸದರಿ ಅವಳಿ ಜಿಲ್ಲೆಗಳಲ್ಲಿ ಯಾವ ಯಾವ ತಾಲ್ಲೂಕು ಆಸ್ಪತ್ರೆಗಳಲ್ಲಿ HIV ತಪಾಸಣಾ ಮತ್ತು ಚಿಕಿತ್ಸಾ ಘಟಕಗಳಿವೆ (ವಿವರಣೆ ನೀಡುವುದು) ; ಅಲ್ಲಿ ಸರಿಯಾದ ಔಷಧಿಗಳ ಸಂಗ್ರಹ ಇದೆಯೆ, ಹೇಗೆ ?

## "ಮೊರಾರ್ಜಿ ವಸತಿ ಶಾಲೆಗಳು"

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೫೮ (೨೦೭೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ "ಮೊರಾರ್ಜಿ ವಸತಿ ಶಾಲೆಗಳು" ಎಷ್ಟು (ಜಿಲ್ಲಾವಾರು ಶಾಲೆಗಳ ವಿವರಣೆ ನೀಡುವುದು) ;

(ಆ) "ಮೊರಾರ್ಜಿ ವಸತಿ ಶಾಲೆಗಳಲ್ಲಿ" ಪ್ರತಿ ವಿದ್ಯಾರ್ಥಿಗೆ ನೀಡುತ್ತಿರುವ ಅನುಕೂಲತೆಗಳು ಯಾವುವು ; ಪ್ರತಿ ವಿದ್ಯಾರ್ಥಿಗೆ ಊಟಕ್ಕಾಗಿ ಮಾಡುತ್ತಿರುವ ವೆಚ್ಚ ಎಷ್ಟು ;

(ಇ) ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ಒಂದರಂತೆ ವಸತಿ ಶಾಲೆಯನ್ನು ಪ್ರಾರಂಭಿಸುವ ಯೋಜನೆ ಸರಕಾರದ ಮುಂದಿದೆಯೇ ; ಇದ್ದರೆ ಎಷ್ಟು ಕಾಲಮಿತಿಯಲ್ಲಿ ಪ್ರಾರಂಭಿಸಲಾಗುವುದು ?

## ತಾಲ್ಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ಆಂಬುಲೆನ್ಸ್ ಮತ್ತು ಕ್ಷಕಿರಣ ವ್ಯವಸ್ಥೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೪೫ (೨೦೭೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿಜಾಪುರ ಮತ್ತು ಬಾಗಲಕೋಟೆ ಅವಳಿ ಜಿಲ್ಲೆಗಳಲ್ಲಿರುವ ತಾಲ್ಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿರುವ ಒಟ್ಟು ಆಂಬುಲೆನ್ಸ್ ವಾಹನಗಳ ಸಂಖ್ಯೆ ಎಷ್ಟು ; (ಪ್ರತಿ ತಾಲ್ಲೂಕುವಾರು ವಿವರ ನೀಡುವುದು) ಅವುಗಳಲ್ಲಿ ಎಷ್ಟು ಸುಸ್ಥಿತಿಯಲ್ಲಿವೆ ; ಅವುಗಳಿಗೆ ಸರಿದೂಗುವ ಸಂಖ್ಯೆಯಲ್ಲಿ ವಾಹನ ಚಾಲಕರಿದ್ದಾರೆಯೇ, ಹೇಗೆ (ತಿಳಿಸುವುದು) ;

(ಆ) ಈ ಅವಳಿ ಜಿಲ್ಲೆಗಳ ಎಷ್ಟು ಆಸ್ಪತ್ರೆಗಳಲ್ಲಿ ಕ್ಷಕಿರಣ ಎಕ್ಸರೇ ಯಂತ್ರಗಳ ವ್ಯವಸ್ಥೆ ಇರುತ್ತದೆ ; (ತಾಲ್ಲೂಕುವಾರು ವಿವರಣೆ ನೀಡುವುದು) ; ಅವುಗಳಿಗೆ ಸರಿದೂಗುವ ತಂತ್ರಜ್ಞರ ವ್ಯವಸ್ಥೆ ಇದೆಯೇ ; ನಿಷ್ಕ್ರಿಯ ಯಂತ್ರಗಳೆಷ್ಟಿವೆ ?

## ಸಮುದಾಯ ಭವನ ನಿರ್ಮಾಣ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೬೦ (೨೦೭೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾಂ ಜಿಲ್ಲೆಯ ನಗರ, ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿರುವ ಪರಿಶಿಷ್ಟ ಜನಾಂಗದ ಕಾಲೋನಿಗಳಲ್ಲಿ ಸಮುದಾಯ ಭವನದ ಅಗತ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪರಿಶಿಷ್ಟ ಜನಾಂಗದ ಜನರು ವಾಸ ಮಾಡುತ್ತಿರುವ ಪ್ರದೇಶಗಳಲ್ಲಿ ಈ ಭವನಗಳನ್ನು ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಗುತ್ತಿಗೆ ಆಧಾರದ ಪ್ರಾಂಶುಪಾಲರ ಸೇವೆ ಖಾಯಂ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೬೧ (೨೦೭೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಸತಿ ಶಾಲೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಪ್ರಾಂಶುಪಾಲರು ಹಾಗೂ ಶಿಕ್ಷಕರ ಸಂಖ್ಯೆ ಎಷ್ಟು ;

(ಆ) ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಇವರುಗಳನ್ನು ಖಾಯಂಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಇ) ಹಾಗಿದ್ದಲ್ಲಿ, ಸರ್ಕಾರ ಇಲ್ಲಿಯವರೆಗೆ ಎಷ್ಟು ಜನರನ್ನು ಖಾಯಂಗೊಳಿಸಿ ಆದೇಶ ಹೊರಡಿಸಿದೆ ;

(ಈ) ಆದೇಶ ನೀಡದಿದ್ದಲ್ಲಿ, ಸರ್ಕಾರ ಯಾವ ದಿನಾಂಕದಂದು ಖಾಯಂ ಆದೇಶ ನೀಡಲಿದೆ ?

## ಪ್ರಧಾನ ಮಂತ್ರಿ ಹದಿನೈದು ಅಂಶಗಳ ಕಾರ್ಯಕ್ರಮದ ಬಗ್ಗೆ

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೬೭೨ (೨೦೭೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ಸರ್ಕಾರವು ಅಧಿಕಾರ ವಹಿಸಿಕೊಂಡ ನಂತರ "ಪ್ರಧಾನ ಮಂತ್ರಿ ಹದಿನೈದು ಅಂಶಗಳ ಕಾರ್ಯಕ್ರಮ"ಕ್ಕೆ ಸಂಬಂಧಿಸಿದಂತೆ ಇಲ್ಲಿಯವರೆಗೆ ಎಷ್ಟು ರಾಜ್ಯ ಮಟ್ಟದ ಹಾಗೂ ಜಿಲ್ಲಾ ಮಟ್ಟದ ಸಭೆಗಳನ್ನು ನಡೆಸಿದೆ ; ಅವುಗಳಲ್ಲಿ ಆದ ಚರ್ಚೆ ಅಥವಾ ನಿರ್ಣಯಗಳೇನು (ಜಿಲ್ಲಾವಾರು ವಿವರಗಳನ್ನು ನೀಡುವುದು) ;

(ಆ) ಜಿಲ್ಲಾ ಮಟ್ಟದಲ್ಲಿ ಸಭೆ ನಡೆಸದಿರುವ ಜಿಲ್ಲಾಧಿಕಾರಿಗಳ ಮೇಲೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಸದರಿ ಕಾರ್ಯಕ್ರಮದಲ್ಲಿ ಅಲ್ಪಸಂಖ್ಯಾತರಿಗೆಂದು ಮೀಸಲಿರುವ ಶೇ೧೫ರಷ್ಟು ಅನುದಾನವನ್ನು ಅಲ್ಪಸಂಖ್ಯಾತರ ಅಭಿವೃದ್ಧಿಗೆ ಬಿಡುಗಡೆ ಮಾಡಲಾಗಿದೆಯೇ (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು) ;

(ಈ) ಸದರಿ ಕಾರ್ಯಕ್ರಮ ಅನುಷ್ಠಾನವಾಗುತ್ತಿದೆಯೇ ; ಅಥವಾ ಕೇವಲ ಜಾಹೀರಾತಿಗಾಗಿ ಬಳಸಿಕೊಳ್ಳಲಾಗುತ್ತಿದೆಯೇ ?

## ಗಿರಿಜನ ಆಶ್ರಮ ಶಾಲೆಗಳಲ್ಲಿ ಎರವಲು ಸೇವೆಯ ಶಿಕ್ಷಕರು

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೬೬೩ (೨೦೮೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಜಿಲ್ಲೆ ಹೆಗ್ಗಡದೇವನಕೋಟೆ (೫೦) ಗಿರಿಜನ ಆಶ್ರಮ ಶಾಲೆಗಳಲ್ಲಿ ಎರವಲು ಸೇವೆಯ ಮೇರೆಗೆ ನಿಯೋಜಿಸಿರುವ ಶಿಕ್ಷಕರನ್ನು ಮಾತ್ರ ಇಲಾಖೆಗೆ ವಾಪಸ್ಸು ಕಳುಹಿಸಲು ಶಿಕ್ಷಣ ಇಲಾಖೆಯಿಂದ ಆದೇಶ ಬಂದಿದೆಯೇ ;

(ಆ) ಈ ಶಾಲೆಯಲ್ಲಿರುವ ೫ ಜನ ಎರವಲು ಸೇವೆ ನೌಕರರ ಕಾರ್ಯವೈಖರಿ ವಿರುದ್ಧ ಸಾರ್ವಜನಿಕರಿಂದ ದೂರು, ಪ್ರತಿಭಟನೆ, ಧರಣಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇವರನ್ನು ಆಶ್ರಮ ಶಾಲೆಯಲ್ಲಿಯೇ ಮುಂದುವರೆಸಲು ಕಾರಣಗಳೇನು ?

## ತಾಲ್ಲೂಕು ಯೋಜನಾ ಘಟಕಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೬೪ (೨೦೮೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಲ್ಲಾ ತಾಲ್ಲೂಕುಗಳಿಗೆ ತಾಲ್ಲೂಕು ಯೋಜನಾ ಘಟಕಗಳು ಮಂಜೂರಾಗಿವೆಯೇ ; ಇಲ್ಲವಾದಲ್ಲಿ ಕಾರಣವೇನು ;

03395-2

(ಆ) ಹಾಲಿ ಇರುವ ತಾಲ್ಲೂಕು ಯೋಜನಾ ಘಟಕಗಳಿಗೆ ಮಂಜೂರಾದ ಸಿಬ್ಬಂದಿ ಸಂಖ್ಯೆ ಎಷ್ಟು ; ಕೊರತೆ ಇರುವ ಸಿಬ್ಬಂದಿ ಸಂಖ್ಯೆ ಎಷ್ಟು ; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು (ಘಟಕವಾರು, ಹುದ್ದೆವಾರು ವಿವರ ನೀಡುವುದು) ?

## ಸರ್ಕಾರಿ ಆಯುರ್ವೇದಿಕ್ ಆಸ್ಪತ್ರೆಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೬೫ (೨೦೮೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಆಯುರ್ವೇದಿಕ್ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಅವುಗಳಿಗೆ ಮಂಜೂರಾದ ಹುದ್ದೆಗಳೆಷ್ಟು ; ಕೊರತೆ ಇರುವ ಹುದ್ದೆಗಳೆಷ್ಟು ; ಈ ಕೊರತೆಯನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು (ಜಿಲ್ಲಾವಾರು, ಆಸ್ಪತ್ರೆವಾರು ವಿವರ ನೀಡುವುದು) ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮಂಜೂರಾದ ಆಯುಷ್ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು ; ಅವು ಯಾವುವು ; ಕೊರತೆ ಇರುವ ಆಯುಷ್ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು ; ಈ ಕೊರತೆಯನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು (ಜಿಲ್ಲಾವಾರು ವಿವರ ನೀಡುವುದು) ;

(ಇ) ರಾಜ್ಯದಲ್ಲಿ ಆಯುಷ್ ವೈದ್ಯಾಧಿಕಾರಿಗಳ ನೇಮಕಕ್ಕೆ ಇರುವ ಮಾನದಂಡಗಳೇನು ?

## ರಸ್ತೆ ಸಾರಿಗೆ ಪ್ರಾಧಿಕಾರ ನೇಮಕ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೬೬೬ (೨೦೮೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ, ಯಾವ, ಜಿಲ್ಲೆಗಳಲ್ಲಿ ರಸ್ತೆ ಸಾರಿಗೆ ಪ್ರಾಧಿಕಾರ (R.T.A.) ನೇಮಿಸಲಾಗಿಲ್ಲ ; ನೇಮಿಸದೆ ಇರಲು ಕಾರಣವೇನು ;

(ಆ) ರಸ್ತೆ ಸಾರಿಗೆ ಪ್ರಾಧಿಕಾರ (R.T.A.) ನೇಮಿಸಲು ಇರುವ ಮಾನದಂಡವೇನು ;

(ಇ) ಉಡುಪಿ ಜಿಲ್ಲೆಯಲ್ಲಿ ರಸ್ತೆ ಸಾರಿಗೆ ಪ್ರಾಧಿಕಾರವನ್ನು ಯಾವಾಗ ನೇಮಿಸಲಾಗುವುದು ; ಇಲ್ಲವಾದಲ್ಲಿ ಕಾರಣವೇನು ;

(ಈ) ಜಿಲ್ಲೆಯಲ್ಲಿ ಸಾಕಷ್ಟು ಬಸ್ಸು ಸೌಲಭ್ಯವಿಲ್ಲದ ಗ್ರಾಮಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ನಕಲಿ ಪ್ರಮಾಣ ಪತ್ರ ಸೃಜನೆ ಮತ್ತು ದುರುಪಯೋಗ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೬೬೭ (೨೦೮೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಹತ್ತು ವರ್ಷಗಳಲ್ಲಿ ಸರ್ಕಾರಿ ನೌಕರರು ಮತ್ತು ಅಧಿಕಾರಿಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಕಲಿ

ಪ್ರಮಾಣ ಪತ್ರಗಳನ್ನು ಸೃಜಿಸಿ ದುರುಪಯೋಗ ಪಡಿಸಿಕೊಂಡಿರುವ ಪ್ರಕರಣಗಳು ಎಷ್ಟು ; ಮತ್ತು ಯಾವುವು (ಜಿಲ್ಲಾವಾರು, ಪ್ರಕರಣವಾರು, ವರ್ಷವಾರು ವಿವರ ನೀಡುವುದು) ;

(ಆ) ಮೇಲಿನ ಪ್ರಕರಣಗಳಲ್ಲಿ ಶಿಕ್ಷೆಯಾಗಿರುವ ಪ್ರಕರಣಗಳೆಷ್ಟು ; ಪ್ರಸ್ತುತ ವಿಚಾರಣೆ ನಡೆಯುತ್ತಿರುವ ಪ್ರಕರಣಗಳೆಷ್ಟು ; ಪ್ರಸ್ತುತ ವಿಚಾರಣೆಗೆ ಬಾಕಿ ಇರುವ ಪ್ರಕರಣಗಳೆಷ್ಟು (ಜಿಲ್ಲಾವಾರು, ವರ್ಷವಾರು, ಪ್ರಕರಣವಾರು ವಿವರ ನೀಡುವುದು) ;

(ಇ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಕಲಿ ಪ್ರಮಾಣ ಪತ್ರಗಳನ್ನು ಸೃಜಿಸಿ ದುರುಪಯೋಗ ಪಡಿಸಿಕೊಂಡ ವ್ಯಕ್ತಿಗಳು ಹಾಗೂ ದುರುಪಯೋಗ ಪಡಿಸಿಕೊಳ್ಳುವ ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಳ್ಳುವ ತುರ್ತು ಕಾನೂನು ಕ್ರಮಗಳೇನು ?

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿರುವ ವಾಹನಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೬೭೮ (೨೦೮೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಇರುವ ಒಟ್ಟು ವಾಹನಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು) ;

(ಆ) ಉಡುಪಿ ಜಿಲ್ಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಇರುವ ವಾಹನಗಳಲ್ಲಿ ಸರ್ಕಾರಿ ವಾಹನಗಳ ಸಂಖ್ಯೆ ಎಷ್ಟು ಮತ್ತು ಖಾಸಗಿಯವರಿಂದ ಬಾಡಿಗೆಗೆ ಪಡೆದ ವಾಹನಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ಖಾಸಗಿಯವರಿಂದ ಪಡೆದ ವಾಹನಗಳಿಗೆ ಬಾಡಿಗೆ ನಿರ್ಧರಿಸುವಾಗ ಅನುಸರಿಸುವ ಮಾನದಂಡಗಳೇನು ;

(ಇ) ಸದರಿ ಜಿಲ್ಲೆಯಲ್ಲಿ ಇಲಾಖೆಯಲ್ಲಿ ಇರುವ ವಾಹನಗಳಲ್ಲಿ ಬಳಕೆಯಾಗದೇ ಇರುವ ವಾಹನಗಳೆಷ್ಟು ; ಮತ್ತು ಇವುಗಳನ್ನು ಬಳಸದೇ ಇರಲು ಕಾರಣವೇನು (ತಾಲ್ಲೂಕುವಾರು ವಿವರ ನೀಡುವುದು) ?

## ಪಡಿತರ ಚೀಟಿಗಳ ತಾರತಮ್ಯ ಸರಿಪಡಿಸುವುದು

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೬೯ (೨೦೮೧) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಡಿತರ ವ್ಯವಸ್ಥೆಯಲ್ಲಿ ಬಿ.ಪಿ.ಎಲ್. ಮತ್ತು ಎ.ಪಿ.ಎಲ್.ನಲ್ಲಿ ತಾರತಮ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಎ.ಪಿ.ಎಲ್. ಪಡಿತರ ಚೀಟಿ ಹೊಂದಿರುವವರಿಗೆ ಪಡಿತರದಲ್ಲಿ ವಿತರಿಸುವ ಯಾವುದೇ ದಿನಸಿಗಳನ್ನು ಕೊಡದೇ ಇರುವುದನ್ನು ಸರ್ಕಾರ ಗಮನಿಸಿದೆಯೇ ;

(ಇ) ಹಾಗಿದ್ದಲ್ಲಿ, ಈ ವ್ಯತ್ಯಾಸವನ್ನು ಸರಿಪಡಿಸಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು ; ಇದು ಯಾವಾಗ ಜಾರಿಗೆ ಬರುವುದು (ತಿಳಿಸುವುದು) ?

## ಸಮಾಜ ಕಲ್ಯಾಣ ಇಲಾಖಾ ಅಧೀನದ ಶಾಲೆಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೬೭೦ (೨೧೯೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ ವಿಜ್ಞಾನ ಸಾಮಗ್ರಿ ಹಾಗೂ ಯೋಗ ಪುಸ್ತಕ ಖರೀದಿಯಲ್ಲಿ ಅವ್ಯವಹಾರ ನಡೆದಿದೆ ಎಂಬ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಎಷ್ಟು ಅವ್ಯವಹಾರ ನಡೆದಿದೆ (ವರ್ಷಾವಾರು ಮತ್ತು ಶಾಲಾವಾರು ಸಂಪೂರ್ಣ ಮಾಹಿತಿ ನೀಡುವುದು) ;

(ಆ) ಸಾಮಗ್ರಿ ಹಾಗೂ ಪುಸ್ತಕ ಖರೀದಿಯಲ್ಲಿ ಅನುಸರಿಸಬೇಕಾದ ನಿಯಮಗಳ ಉಲ್ಲಂಘನೆಯಾಗಿದೆ ಎನ್ನುವುದಾದರೆ, ಯಾವ ನಿಯಮಗಳ ಆಧಾರದ ಮೇಲೆ ಸಾಮಗ್ರಿಗಳನ್ನು ಹಾಗೂ ಪುಸ್ತಕಗಳನ್ನು ಖರೀದಿಸಲಾಗಿದೆ ;

(ಇ) ನಿಯಮಗಳನ್ನು ಉಲ್ಲಂಘಿಸಿ ಸಾಮಗ್ರಿ ಮತ್ತು ಪುಸ್ತಕ ಖರೀದಿಸಿದ ಶಾಲೆಗಳ ವಿರುದ್ಧ ಕೈಗೊಂಡ ಕ್ರಮಗಳೇನು (ವಿವರಿಸುವುದು) ;

(ಈ) ವಿಜ್ಞಾನ ಸಾಮಗ್ರಿ ಮತ್ತು ಯೋಗ ಪುಸ್ತಕಗಳನ್ನು ಯಾವ ಸಂಸ್ಥೆಗಳಿಂದ ಖರೀದಿಸಲಾಗಿದೆ (ವಿವರ ನೀಡುವುದು) ?

## ವೈದ್ಯಕೀಯ ಕಾಲೇಜುಗಳಲ್ಲಿ ಬೋಧಕ / ಬೋಧಕೇತರ ಹುದ್ದೆಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೬೭೧ (೨೦೮೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ವೈದ್ಯಕೀಯ ಕಾಲೇಜುಗಳು ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು ; ಹೈ.ಕ ಪ್ರದೇಶದ ವಿವರ ಪ್ರತ್ಯೇಕವಾಗಿ ನೀಡುವುದು) ;

(ಆ) ಈ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು (ಹೈ.ಕ.ಪ್ರದೇಶದ ವಿವರ ಪ್ರತ್ಯೇಕವಾಗಿ ನೀಡುವುದು) ;

(ಇ) ಹೊಸದಾಗಿ ವೈದ್ಯಕೀಯ ಕಾಲೇಜು ಸ್ಥಾಪನೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಾದರೆ ಎಷ್ಟು ಕಾಲೇಜುಗಳನ್ನು ಪ್ರಾರಂಭಿಸಲು ಯೋಜನೆ ರೂಪಿಸಲಾಗಿದೆ (ವಿವರ ನೀಡುವುದು) ;

(ಈ) ಹೊಸದಾಗಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಇರುವ ಮಾನದಂಡಗಳೇನು (ಸಮಗ್ರ ವಿವರ ನೀಡುವುದು) ?

## ಬೋಗಸ್ ಪಡಿತರ ಚೀಟಿ ತಡೆಗಟ್ಟುವುದು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೬೭೨ (೨೦೮೭) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೋಗಸ್ ಕಾರ್ಡುಗಳನ್ನು ತಡೆಗಟ್ಟುವ ಸಲುವಾಗಿ ಗ್ರಾಹಕರಿಗೆ ಎಪಿಕ್ ಕಾರ್ಡ್ (ಚುನಾವಣಾ ಗುರುತಿನ ಚೀಟಿ) ಹಾಗೂ ಮೊಬೈಲ್ ನಂಬರ್ ಕಡ್ಡಾಯಗೊಳಿಸಲಾಗಿದ್ದು, ಇದರಿಂದ ಸಂಪೂರ್ಣವಾಗಿ ಬೋಗಸ್ ಕಾರ್ಡುಗಳನ್ನು ತಡೆಗಟ್ಟಲು ಸಾಧ್ಯವಾಗಿದೆಯೇ ; ಇಲ್ಲಿಯುವರೆಗೆ ಎಷ್ಟು ಬೋಗಸ್ ಕಾರ್ಡ್‌ಗಳನ್ನು ಗುರುತಿಸಲಾಗಿದೆ (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ಗುರುತಿಸಲಾದ ನಕಲಿ ಪಡಿತರದಾರರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು (ಜಿಲ್ಲಾವಾರು ಮಾಹಿತಿ ನೀಡುವುದು) ?

## ಹಿಂದೂ ಬೇರಡ್ ಎಂಬುದರ ಬದಲಾಗಿ ಹಿಂದೂ ಬೇಡರ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೬೭೩ (೨೦೯೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಿಂದೂ ಬೇರಡ್ ಎಂಬುದರ ಬದಲಾಗಿ ಹಿಂದೂ ಬೇಡರ್ ಎಂದು ಬದಲಾವಣೆ ಮಾಡಲು ಸರಕಾರ ಯಾವ ದಿನಾಂಕದಂದು ಆಜ್ಞೆ ಮಾಡಿದೆ ; ಇದಕ್ಕೆ ಕಾರಣಗಳೇನು ;

(ಆ) ತಳವಾರ (ವರ್ಗ–೧) ಇದ್ದವರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಸರಕಾರ ಕ್ರಮ ತೆಗೆದುಕೊಂಡಿದ್ದು ಯಾವಾಗ ; ಅದರ ದಿನಾಂಕ, ಸರಕಾರಿ ಆದೇಶ ಸಂಖ್ಯೆ ಹಾಗೂ ಇನ್ನಿತರ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಈ ಆಜ್ಞೆ ಪೂರ್ವಾನ್ವಯವಾಗಿ ಜಾರಿಯಲ್ಲಿದೆಯೇ ; ಅಥವಾ ಈ ಆಜ್ಞೆ ಹೊರಡಿಸಿದ ದಿನಾಂಕದಿಂದ ಜಾರಿಯಲ್ಲಿ ಇದೆಯೇ ;

(ಈ) ಈ ರೀತಿ ಸರ್ಕಾರ ತೀರ್ಮಾನಿಸಿದ ನಂತರ ಯಾವ ಯಾವ ಜಾತಿಗಳು ಈಗ ಪರಿಶಿಷ್ಟ ಪಂಗಡಕ್ಕೆ ಸೇರಿವೆ ?

## ಹೊರ ಗುತ್ತಿಗೆ ನೇಮಕಾತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** :–

೧೬೭೪ (೨೦೯೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಇಲಾಖೆಯಲ್ಲಿನ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ ಅಡಿಯಲ್ಲಿ ರಾಜ್ಯದಲ್ಲಿ ಇದುವರೆಗೆ ಎಷ್ಟು ಮಂದಿ–ಯಾವ–ಯಾವ ನೌಕರರನ್ನು/ಅಧಿಕಾರಿಯನ್ನು ಹೊರ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ (ವಿವರ ನೀಡುವುದು) ;

(ಆ) ಈ ನೌಕರರ ನೇಮಕಾತಿಯನ್ನು ಯಾವ ಮಾನದಂಡದಡಿಯಲ್ಲಿ ಮಾಡಿಕೊಳ್ಳಲಾಗಿದೆ ;

(ಇ) ಈ ನೇಮಕಾತಿಗಳಲ್ಲಿ ಕಾನೂನನ್ನು ಉಲ್ಲಂಘಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಈ) ಹಾಗಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ?

## ಸರ್ಕಾರಿ ಮೆಡಿಕಲ್ ಕಾಲೇಜು

**ಶ್ರೀ ಐವನ್ 'ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೬೭೫ (೨೦೯೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರಿನಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಸ್ಥಾಪನೆಯ ಉದ್ದೇಶ ಸರ್ಕಾರದ ಮುಂದಿದೆಯೇ ;

(ಆ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜುಗಳಿವೆ ; ಅವುಗಳಲ್ಲಿ ಒಟ್ಟು ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ದೊರೆತಿವೆ (ಕಾಲೇಜುವಾರು ವಿವರ ನೀಡುವುದು) ;

(ಇ) ಮಂಗಳೂರಿನಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ವಿಭಾಗವನ್ನು ತೆರೆಯುವ ಆಲೋಚನೆ ಸರ್ಕಾರದ ಮುಂದಿದೆಯೇ ;

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ರಾಜೀವ್‌ಗಾಂಧಿ ವಿಶ್ವವಿದ್ಯಾಲಯದ ಅಧೀನದ ಕಾಲೇಜುಗಳಿವೆ ಮತ್ತು ಈ ಕಾಲೇಜುಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳೆಷ್ಟು (ವಿವರ ನೀಡುವುದು) ?

## ಬಿ.ಪಿ.ಎಲ್. ಕಾರ್ಡ್‌ಗಳು

**ಶ್ರೀ ಐವನ್ 'ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೬೭೬ (೨೧೧೧) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಬಿ.ಪಿ.ಎಲ್. ಕಾರ್ಡುದಾರರನ್ನು ಸರ್ಕಾರ ಗುರುತಿಸಿದೆ ; ಎಷ್ಟು ಅರ್ಜಿಗಳು ಸರ್ಕಾರದ ಮುಂದೆ ಬಿ.ಪಿ.ಎಲ್. ಕಾರ್ಡ್ ನೀಡಲು ಬಾಕಿ ಇವೆ ; ಬಾಕಿ ಇದ್ದಲ್ಲಿ, ಎಷ್ಟು ಸಮಯದ ಒಳಗಡೆ ಈ ಅರ್ಜಿಗಳನ್ನು ಇತ್ಯರ್ಥ ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗಿದೆ ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ಎಷ್ಟು ಬಿ.ಪಿ.ಎಲ್. ಕಾರ್ಡ್‌ಗಳನ್ನು ವಿತರಿಸಲಾಗಿದೆ ; ಎಷ್ಟು ಅರ್ಜಿಗಳು ಬಾಕಿ ಇವೆ (ತಾಲ್ಲೂಕುವಾರು ವಿವರಗಳನ್ನು ನೀಡುವುದು) ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯಲ್ಲಿ ಎಷ್ಟು ಹುದ್ದೆಗಳಿವೆ ಮತ್ತು ಎಷ್ಟು ಜನ ಕಾರ್ಯನಿರ್ವಹಿಸುತ್ತಿದ್ದಾರೆ ; ಖಾಲಿ ಇದ್ದಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಏನಾದರೂ ಕ್ರಮ ಕೈಗೊಂಡಿದೆಯೇ (ವಿವರ ನೀಡುವುದು) ;

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜನರ ಬೇಡಿಕೆಯಾದ ಕುಚಲು (Boiled Rice) ಅಕ್ಕಿಯನ್ನು ನೀಡಲು ಕ್ರಮ ಕೈಗೊಳ್ಳಲಾಗಿದೆಯೇ; ಹೌದು ಎಂದಲ್ಲಿ, ಎಷ್ಟು ಟನ್ ಅಕ್ಕಿಯನ್ನು ಒದಗಿಸಲಾಗಿದೆ (ವಿವರ ನೀಡುವುದು) ?

## ಶಾಸಕರ ಪ್ರದೇಶಾಭಿವೃದ್ಧಿ ನಿಧಿ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೬೭೭ (೨೦೯೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ೨೦೧೨ ರಿಂದ ೨೦೧೪ ನೇ ಸಾಲಿನವರೆಗೆ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಿಂದ ಬಿಡುಗಡೆ ಮಾಡಿದ ಅನುದಾನವೆಷ್ಟು ; ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ (ವಿವರ ನೀಡುವುದು) ;

(ಆ) ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿವೆ ; ಕೆಲವು ಕಾಮಗಾರಿಗಳು ಪೂರ್ಣಗೊಳ್ಳದೇ ಇದ್ದಲ್ಲಿ ಕಾಮಗಾರಿಗಳನ್ನು ನಿರಾಕರಿಸಲು ಕಾರಣವೇನು (ವಿವರ ನೀಡುವುದು) ?

## ಖಾಸಗಿ ಬಸ್ಸುಗಳ ಸೇವೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೬೭೮ (೨೦೯೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಸಂಚರಿಸುತ್ತಿರುವ ಖಾಸಗಿ ಬಸ್‌ಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಎಕ್ಸ್‌ಪ್ರೆಸ್, ಸಿಟಿ ಸರ್ವೀಸ್ ಮತ್ತು ಗುತ್ತಿಗೆ ಆಧಾರದ ಬಸ್‌ಗಳ ಸಂಖ್ಯೆ ಎಷ್ಟು (ವಿವರ ನೀಡುವುದು) ;

(ಆ) ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಸಂಚರಿಸುತ್ತಿರುವ ಸರ್ಕಾರಿ ಬಸ್ಸುಗಳ ಸಂಖ್ಯೆ ಎಷ್ಟು ;

(ಇ) ಈ ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ಶಾಲಾ ವಾಹನಗಳಿಗೆ ನೋಂದಣಿ ನೀಡಲಾಗಿದೆ (ವಿವರ ನೀಡುವುದು) ?

## ಹಿಂದುಳಿದ ವರ್ಗದವರಿಗೆ ಸಾಲ

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೬೭೯ (೨೧೦೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೫ ವರ್ಷಗಳಿಂದ ಹಿಂದುಳಿದ ಅಭಿವೃದ್ಧಿ ನಿಗಮದಿಂದ ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಬಿಡುಗಡೆ ಮಾಡಲಾದ ಸಾಲವೆಷ್ಟು ;

(ಆ) ಈ ನಿಗಮದಿಂದ ಸಹಾಯ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಈ ಫಲಾನುಭವಿಗಳಲ್ಲಿ ಇದೇ ನಿಗಮದಿಂದ ಒಂದಕ್ಕಿಂತ ಹೆಚ್ಚು ಸೌಲಭ್ಯಗಳನ್ನು ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಹೆಸರು ಮತ್ತು ವಿಳಾಸಗಳ ವಿವರ ನೀಡುವುದು) ?

## ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೬೮೦ (೨೧೦೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಗ್ರಾಮಾಂತರ, ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ಏಪ್ರಿಲ್-೨೦೧೩ ರಿಂದ ಹೊಸದಾಗಿ ಪ್ರಾರಂಭಿಸಲಾಗಿರುವ ವಿದ್ಯಾರ್ಥಿ ನಿಲಯಗಳೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ಈ ಜಿಲ್ಲೆಗಳ ವ್ಯಾಪ್ತಿಯಲ್ಲಿ ಉನ್ನತೀಕರಿಸಿದ ವಿದ್ಯಾರ್ಥಿ ನಿಲಯಗಳೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ?

**ಪರಿಶಿಷ್ಟ ಜಾತಿ ಹಾಗೂ ಗಿರಿಜನರ ಕಲ್ಯಾಣ ಕಾರ್ಯಕ್ರಮಗಳು.**

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೬೮೧ (೨೧೦೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೩-೧೪ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಹಾಗೂ ಗಿರಿಜನರ ಕಲ್ಯಾಣಕ್ಕಾಗಿ ಮೀಸಲಿಟ್ಟ ಅನುದಾನವೆಷ್ಟು ; ಹಾಗೂ ಬಿಡುಗಡೆ ಮಾಡಲಾದ ಅನುದಾನವೆಷ್ಟು ;

(ಆ) ಯಾವ-ಯಾವ ಉದ್ದೇಶ ಹಾಗೂ ಕಾರ್ಯಕ್ರಮಗಳಿಗಾಗಿ ಸದರಿ ಅನುದಾನವನ್ನು ವ್ಯಯಿಸಲಾಗಿದೆ ;

(ಇ) ಇಲ್ಲಿಯವರೆಗೂ ವ್ಯಯಿಸಲಾದ ಅನುದಾನವೆಷ್ಟು ಉಳಿಕೆಯಾದ ಅನುದಾನವೆಷ್ಟು ?

**ನೂತನ ಸಾರಿಗೆ ಸಂಚಾರ ಪ್ರಾರಂಭಿಸುವುದು.**

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೬೮೨ (೨೧೦೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರವಾಸಿ ಹಾಗೂ ಧಾರ್ಮಿಕ ಕೇಂದ್ರವಾದ ಶಿವಯೋಗ ಮಂದಿರಕ್ಕೆ ಬೈಲಹೊಂಗಲ ಘಟಕದಿಂದ ಶಿವಯೋಗ ಮಂದಿರ (ಮಾರ್ಗ

ಮುನವಳ್ಳಿ ಹೂಲಿಕಟ್ಟಿ) ಹಾಗೂ ಬೈಲಹೊಂಗಲದಿಂದ ಶಿವಯೋಗ ಮಂದಿರ ಮಾರ್ಗ ಶ್ರೀಕ್ಷೇತ್ರ ಗೊಡಚಿ ಮುಖಾಂತರ ಎರಡು ಹೊಸ ಬಸ್ ಸಂಚಾರ ಪ್ರಾರಂಭಿಸಲು ಸಾರ್ವಜನಿಕರು ಹಾಗೂ ಜನಪ್ರತಿನಿಧಿಗಳು ವಿನಂತಿಸಿಕೊಂಡಿದ್ದರೂ ಕೂಡ ಇನ್ನುವರೆಗೂ ಪ್ರಾರಂಭಿಸದೇ ಇರುವ ಸಂಗತಿ ನಿಜವೇ ;

(ಆ) ಯಾವುದೇ ಹೊಸ ಬಸ್ ರೂಟ್ ಪ್ರಾರಂಭಿಸಲು ಕೋರಿದರೆ, ಚಾಲಕ, ನಿರ್ವಾಹಕರ ಮತ್ತು ಬಸ್‌ಗಳ ಕೊರತೆ ಇದೆ ಎಂದು ಸದರಿ ಮಾರ್ಗಗಳಲ್ಲಿ ಆದಾಯ ಬರುವುದಿಲ್ಲ ಎಂಬ ಸಿದ್ಧಪಡಿಸಿದ ಉತ್ತರ ಹೇಳುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಲಾಭದಾಯಕ ಹೊಸ ರೂಟ್ ಪ್ರಾರಂಭಿಸದ ಹಿನ್ನಲೆಯಲ್ಲಿ ಮ್ಯಾಕ್ಸಿಕ್ಯಾಬ್ ಗಾಡಿಗಳ ಸಂಚಾರ ಹೆಚ್ಚಾಗುತ್ತಿದ್ದು, ಕೆ.ಎಸ್.ಆರ್.ಟಿ.ಸಿ ಮುಚ್ಚುವ ಹಂತಕ್ಕೆ ಬಂದ ಸಂಗತಿ ನಿಜವೇ ;

(ಈ) ಹಾಗಿದ್ದಲ್ಲಿ, ಕೂಡಲೇ ಇನ್ನಾದರೂ ಜನ ಪ್ರತಿನಿಧಿಗಳು ಸೂಚಿಸಿದ ಸ್ಥಳಗಳಿಗೆ ಬಸ್ ಪ್ರಾರಂಭಿಸಿ ಕೆ.ಎಸ್.ಆರ್.ಟಿ.ಸಿ.ಯನ್ನು ಲಾಭದಾಯಕವನ್ನಾಗಿ ಮಾಡಲು ಕ್ರಮ ಕೈಕೊಳ್ಳಲಾಗುವುದೇ ;

(ಉ) ಬಸ್ ಸಂಚಾರ ಪ್ರಾರಂಭಿಸಿದರೂ ಎರಡು ದಿನ ಬಿಟ್ಟಂತೆ ಮಾಡಿ ವೇಳೆಗೆ ಸರಿಯಾಗಿ ಬಸ್ ಬಿಡದೇ ಆ ಮಾರ್ಗ ಲಾಭದಾಯಕವಿಲ್ಲವೆಂದು ಹೇಳಿ ಸಂಚಾರವನ್ನು ಸ್ಥಗಿತಗೊಳಿಸುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವುದು.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೬೮೩ (೨೧೦೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆ, ಸವದತ್ತಿ ತಾಲ್ಲೂಕು, ಮುರಗೋಡ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರಕ್ಕೆ ಮನವಿಗಳು ಬಂದಿವೆಯೇ ;

(ಆ) ಈ ಭಾಗದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರು ಹೆಚ್ಚು ಇರುವ ಮತ್ತು ಇಪ್ಪತ್ತು ಗ್ರಾಮಗಳ ಜನರಿಗೆ ಇದೊಂದೇ ಪ್ರಾಥಮಿಕ ಆರೋಗ್ಯ ಕೇಂದ್ರವಿರುವ ಸಂಗತಿ ನಿಜವೇ ;

(ಇ) ಈ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮಾಡಲು ಕ್ರಮ ಕೈಗೊಳ್ಳಲಾಗುವುದೇ ;

(ಈ) ಆಸ್ಪತ್ರೆಯಲ್ಲಿ ಎಲ್ಲಾ ಮೂಲಭೂತ ಸೌಕರ್ಯ ಹೊಂದದೆ ಇರುವುದರಿಂದ ರೋಗಿಗಳು ಬೇರೆ ಊರಿಗೆ ಚಿಕಿತ್ಸೆಗೆ ಹೋಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೀಗಾಗಿ ಪ್ರತಿದಿನ ಆಸ್ಪತ್ರೆಗೆ ಬರತಕ್ಕ ರೋಗಿಗಳ ಸಂಖ್ಯೆ ಕಡಿಮೆ ಆಗುತ್ತಿರುವ ಸಂಗತಿ ನಿಜವೇ ;

(ಉ) ಎಷ್ಟೋ ವರ್ಷಗಳಿಂದ ಈ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ನವೀಕರಿಸದೆ ಇರುವುದು ಹಾಗೂ ಈ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡಕ್ಕೆ ಸುಣ್ಣ ಬಣ್ಣ ಹಚ್ಚದೇ ಸುಸಜ್ಜಿತಗೊಳಿಸದೇ ಇರುವ ಸಂಗತಿ ಸರ್ಕಾರ ಗಮನಿಸಿದೆಯೇ ;

(ಊ) ಈ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಿಬ್ಬಂದಿಯ ಕೊರತೆಯಿರುವ ಸಂಗತಿ ನಿಜವೇ ; ಸಿಬ್ಬಂದಿಯನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದೇ ?

## ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣವನ್ನು ಹೈಟೆಕ್ ಬಸ್ ನಿಲ್ದಾಣವನ್ನಾಗಿ ಮಾಡುವುದು.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೬೮೪ (೨೧೧೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆ, ಬೈಲಹೊಂಗಲ ವಾ.ಕ.ರ.ಸಾ. ಸಂಸ್ಥೆಯ ಬಸ್ ನಿಲ್ದಾಣವು ಯಾವುದೇ ಅಭಿವೃದ್ಧಿ ಕಾಣದ ನಿಲ್ದಾಣವಾಗಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಹಳ ದಿನಗಳಿಂದ ಈ ಬಸ್ ನಿಲ್ದಾಣವನ್ನು ಹೈಟೆಕ್ ಬಸ್ ನಿಲ್ದಾಣವನ್ನಾಗಿ ಮಾಡಬೇಕೆಂಬ ಈ ಭಾಗದ ಜನರ ಬೇಡಿಕೆ ಇದ್ದರೂ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದಿರುವುದು ನಿಜವೇ ;

(ಇ) ಬಸ್ ನಿಲ್ದಾಣದ ಹಿಂದೆ ಇರುವ ಡಿಪೋದ ಹತ್ತಿರ ಸಾಕಷ್ಟು ಸ್ಥಳ ಇದ್ದು, ಅದು ಅತಿಕ್ರಮಣವಾಗುವುದನ್ನು ತಪ್ಪಿಸಲು ವ್ಯಾಪಾರಿ ಮಳಿಗೆಗಳನ್ನು ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ ;

(ಈ) ಬಸ್ ನಿಲ್ದಾಣದಲ್ಲಿ ಇರುವ ಮೂತ್ರಾಲಯ, ಶೌಚಾಲಯಗಳನ್ನು ಆಧುನೀಕರಣಗೊಳಿಸಲಾಗುವುದೇ ;

(ಉ) ಬಸ್ಸುಗಳನ್ನು ಸುಸಜ್ಜಿತವಾಗಿ ಇಡುವುದು ಹಾಗೂ ವೇಳೆಗೆ ಸರಿಯಾಗಿ ಬಸ್ ಓಡಿಸುವ ಕ್ರಮ ಕೈಗೊಳ್ಳಲಾಗುವುದೇ ; ಹಾಗೂ ನಿಷ್ಕ್ರಿಯವಾದ ವಾಹನಗಳನ್ನು ಬದಲಿಸಿ ಹೊಸ ಬಸ್ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಊ) ಬಸ್ ನಿಲ್ದಾಣದಲ್ಲಿ ಎಳ್ಳಷ್ಟು ಸ್ವಚ್ಛತೆ ಇಲ್ಲದಿರುವುದು ಪ್ರಯಾಣಿಕರು ಕುಳಿತುಕೊಳ್ಳಲು ಸುಸಜ್ಜಿತವಾಗಿ ವ್ಯವಸ್ಥೆ ಇಲ್ಲದಿರುವುದು ಹಾಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವುದು ಹಾಗೂ ರಾತ್ರಿ ಸರಿಯಾದ ದೀಪದ ವ್ಯವಸ್ಥೆ ಇರದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ ?

## ದೇವಾಂಗ ಸಮುದಾಯ ಭವನ ಕಟ್ಟಡ ನಿರ್ಮಾಣಕ್ಕೆ ಅನುದಾನ ಬಿಡುಗಡೆ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೬೮೫ (೨೧೧೮) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುರುವೇಕೆರೆ ತಾಲ್ಲೂಕು ಮುನಿಯೂರು ಗ್ರಾಮದ ದೇವಾಂಗ ಸಮುದಾಯ ಭವನಕ್ಕೆ ಕಟ್ಟಡ ನಿರ್ಮಾಣ ಮಾಡಲು ಬೇಡಿಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಆಡಳಿತಾತ್ಮಕ ಮಂಜೂರಾತಿ ಎಷ್ಟಕ್ಕೆ ನೀಡಲಾಗಿದೆ ;

(ಇ) ಬಿಡುಗಡೆ ಮಾಡಲಾದ ಹಣ ಎಷ್ಟು ;

(ಈ) ಉಳಿದ ಹಣ ಯಾವಾಗ ಬಿಡುಗಡೆ ಮಾಡಲಾಗುವುದು ?

**ತುರುವೇಕೆರೆ ಡಿಪೋದಿಂದ ಸಂಚರಿಸುವ ಬಸ್ಸುಗಳು.**

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೬೮೬ (೨೧೧೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

ಅ) ತುರುವೇಕೆರೆ ಡಿಪೋದಿಂದ ಪ್ರತಿ ದಿವಸ ಸಂಚರಿಸುವ ಬಸ್‌ಗಳ ವಿವರ ನೀಡುವುದು ; ಡಿಪೋದಲ್ಲಿ ಇರುವ ಬಸ್ಸುಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದ ಯಾವ ಯಾವ ಭಾಗದಿಂದ ತುರುವೇಕೆರೆ ಮಾರ್ಗವಾಗಿ ಬಸ್ಸುಗಳು ಸಂಚರಿಸುತ್ತಿವೆ ;

(ಇ) ತುರುವೇಕೆರೆ ಡಿಪೋದಲ್ಲಿರುವ ಬಸ್ಸುಗಳು ತುಂಬಾ ಹಳೆಯದಾಗಿದ್ದು, ಪ್ರಯಾಣಕ್ಕೆ ತೊಂದರೆಯಾಗಿರುವುದು ಸರ್ಕಾರಕ್ಕೆ ತಿಳಿದಿದೆಯೇ ;

(ಈ) ಹಾಗಿದ್ದಲ್ಲಿ, ಹೊಸ ಬಸ್ಸುಗಳನ್ನು ದೂರದ ಮಾರ್ಗಗಳಿಗೆ ನೀಡಲಾಗುತ್ತದೆಯೇ ;

(ಉ) ಡಿಪೋದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; ಸಕಾಲಕ್ಕೆ ಎಲ್ಲಾ ಬಸ್ಸುಗಳು ಸಂಚರಿಸಲು ಸಿಬ್ಬಂದಿಗಳು ದಕ್ಷತೆಯಿಂದ ಕೆಲಸ ನಿರ್ವಹಿಸುತ್ತಿದ್ದಾರೆಯೆ ?

## ತಾಲ್ಲೂಕು ಆಸ್ಪತ್ರೆ ನಿರ್ವಹಣೆ.

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೬೮೭ (೨೧೧೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

ಅ) ತುರುವೇಕೆರೆ ತಾಲ್ಲೂಕು ಆಸ್ಪತ್ರೆಯಲ್ಲಿ ಕಳೆದ ಮೂರು ವರ್ಷಗಳಿಂದ ನಿರ್ವಹಣೆಯನ್ನು ನಿರ್ವಹಿಸುತ್ತಿರುವ ಸಂಸ್ಥೆ ಯಾವುದು ;

(ಆ) ಪ್ರತಿ ವರ್ಷ ನೀಡುವ ಗುತ್ತಿಗೆ ಹಣ ಎಷ್ಟು ನಿರ್ವಹಣೆಗೆ ನೇಮಿಸಿಕೊಳ್ಳಲು ಇರುವ ಮಾನದಂಡವೇನು ;

(ಇ) ಆಸ್ಪತ್ರೆಯಲ್ಲಿ ಎಷ್ಟು ಜನ ಕೆಲಸ ಮಾಡುತ್ತಿದ್ದಾರೆ ; ಯಾರ್ಯಾರಿಗೆ ಏನೇನು ಜವಾಬ್ದಾರಿ ನೀಡಲಾಗಿದೆ ;

(ಈ) ಪ್ರತಿಯೊಬ್ಬರಿಗೆ ನೀಡುತ್ತಿರುವ ಮಾಹೆಯಾನ ದರ ಎಷ್ಟು ;

(ಉ) ನಿರ್ವಹಣೆ ಯಾವ ರೀತಿ ಮಾಡಲಾಗುತ್ತಿದೆ (ಪೂರ್ಣ ವಿವರ ಕೊಡುವುದು) ?

## ಬೆಂಗಳೂರು ನಗರದಲ್ಲಿ ಆಸ್ಪತ್ರೆಗಳು.

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೬೮೮ (೨೧೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

ಅ) ಬೆಂಗಳೂರು ನಗರದಲ್ಲಿರುವ ಬಡವರಿಗಾಗಿ ಯಾವುದೇ ಖರ್ಚಿಲ್ಲದೆ ಔಷಧ ಹಾಗೂ ಚಿಕಿತ್ಸೆ ನೀಡುತ್ತಿರುವ ಆಸ್ಪತ್ರೆಗಳಾವುವು ;

(ಆ) ಹಾಗಿದ್ದಲ್ಲಿ, ಈ ಆಸ್ಪತ್ರೆಗಳಿಗೆ ಪ್ರತಿ ವರ್ಷ ನೀಡುತ್ತಿರುವ ಅನುದಾನವೆಷ್ಟು ;

(ಇ) ಕೆಲವು ಆಸ್ಪತ್ರೆಗಳಲ್ಲಿ ಔಷಧ ಇಲ್ಲದೆ ಬೇರೆಡೆಗೆ ಚೀಟಿ ಬರೆದು ಕಳುಹಿಸುತ್ತಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಈ ವ್ಯವಸ್ಥೆ ಸರಿಪಡಿಸಿ ಬಡವರಿಗೆ ನ್ಯಾಯ ದೊರಕಿಸಿಕೊಡಲಾಗುವುದೇ ?

**ಸರ್ಕಾರಿ ಆಸ್ಪತ್ರೆಗಳಲ್ಲಿರುವ ಕಾರ್ಮಿಕರು ಮತ್ತು ಜನಸ್ಪಂದನೆ.**

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು)** :–

೧೬೮೯ (೨೧೨೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಕರ್ನಾಟಕ ಆರೋಗ್ಯ ವ್ಯವಸ್ಥೆ ಅಭಿವೃದ್ಧಿ ಮತ್ತು ಸುಧಾರಣೆ ಯೋಜನೆಯಡಿ ಸ್ಥಾಪಿಸಲಾದ ನಾಗರೀಕ ಸಹಾಯಕ ಕೇಂದ್ರ (Help Desk)ಗಳನ್ನು ಮುಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ಕಾರಣ ತಿಳಿಸುವುದು) ;

(ಆ) ನಾಗರೀಕ ಸಹಾಯಕ ಕೇಂದ್ರ (Help Desk)ಗಳನ್ನು ಮುಚ್ಚಿದರೆ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ೪೦೦ ಕಾರ್ಮಿಕರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಲಾಗುವುದೇ ಅಥವಾ ಕಲ್ಪಿಸಲಾಗಿದೆಯೇ ;

(ಇ) ಇದನ್ನು ಮುಚ್ಚುವುದರಿಂದ ಅನಕ್ಷರಸ್ಥ ಮತ್ತು ಬಡರೋಗಿಗಳಿಗೆ ಮಾಹಿತಿ ನೀಡುವ ವ್ಯವಸ್ಥೆ ಮಾಡಲಾಗಿದೆಯೇ ;

(ಈ) ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ನೀಡುವ ಆಹಾರ ವ್ಯವಸ್ಥೆಯಲ್ಲಿ, ಆಹಾರ ವಿತರಣೆಯನ್ನು ಖಾಸಗಿಯವರಿಗೆ ನೀಡಲಾಗುತ್ತಿದ್ದು, ಒಬ್ಬ ರೋಗಿಗೆ ದಿನಕ್ಕೆ ಉಚಿತವಾಗಿ ನೀಡುತ್ತಿರುವ ಆಹಾರದ ಪ್ರಮಾಣವೆಷ್ಟು ಹಾಗೂ ಯಾವ ಪದಾರ್ಥಗಳನ್ನು ನೀಡಲಾಗುತ್ತಿದೆ ; ಈ ಆಹಾರ ಪದಾರ್ಥಗಳು ಕೆಲವೆಡೆ ಕಡಿಮೆ ಗುಣಮಟ್ಟದ್ದಾಗಿದ್ದು, ಇವುಗಳನ್ನು ಪರೀಕ್ಷಿಸಲು ಸರ್ಕಾರದಿಂದ ಯಾರನ್ನು ನೇಮಿಸಲಾಗಿದೆ ;

(ಉ) ನೇಮಿಸಿದ್ದಲ್ಲಿ, ಅವರು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆಯೇ ; ಇಲ್ಲವಾದಲ್ಲಿ, ಇವರ ಬಗ್ಗೆ ಸರ್ಕಾರ ಕ್ರಮಕೈಗೊಂಡಿದೆಯೇ (ವಿವರ ನೀಡುವುದು) ;

(ಊ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ಆಸ್ಪತ್ರೆಗಳಿದ್ದು, ಉಚಿತ ಆಹಾರ ವಿತರಣೆಗೆ ಮಾಹೆಯಾನ ಖರ್ಚು ಮಾಡುತ್ತಿರುವ ಹಣವೆಷ್ಟು (ತಿಳಿಸುವುದು) ;

(ಋ) ರಾಜ್ಯದ ಎಲ್ಲಾ ಆಸ್ಪತ್ರೆಗಳಲ್ಲೂ ಉಚಿತ ಆಹಾರ ನೀಡಲಾಗುತ್ತಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು) ಈ ಆಹಾರ ವಿತರಣೆಗಾರರಿಗೆ, ಕೆಲಸ ನೀಡಲು ಸರ್ಕಾರ ವಿಧಿಸಿರುವ ಮಾನದಂಡಗಳೇನು (ತಿಳಿಸುವುದು) ?

## ನಕಲಿ ಜಾತಿ ಪ್ರಮಾಣ ಪತ್ರ ಮತ್ತು ವಿದ್ಯಾಸಿರಿ ಯೋಜನೆ.

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೬೯೦ (೨೧೩೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

ಅ) ರಾಜ್ಯದಲ್ಲಿ ನಕಲಿ ಜಾತಿ ಪ್ರಮಾಣ ಪತ್ರ ಪಡೆದ ಬಗ್ಗೆ ಪ್ರಕರಣಗಳು ದಾಖಲಾಗಿವೆಯೋ ; ದಾಖಲಾಗಿದ್ದಲ್ಲಿ, ಜಿಲ್ಲಾವಾರು

ವಿವರಗಳೊಂದಿಗೆ ಪ್ರತಿಯೊಬ್ಬ ನಕಲಿ ಜಾತಿ ಪ್ರಮಾಣ ಪತ್ರ ಪಡೆದ ಆರೋಪಿ ಹಾಗೂ ದೂರು ನೀಡಿದವರ ವಿವರ ಹಾಗೂ ಇದುವರೆಗೂ ಎಷ್ಟು ಪ್ರಕರಣಗಳು ತನಿಖೆ ಪೂರ್ಣಗೊಂಡು ಸಾಬೀತಾಗಿವೆ ; ಇವರ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ; ಎಷ್ಟು ಪ್ರಕರಣಗಳು ತನಿಖೆ ಹಂತದಲ್ಲಿವೆ ;

(ಆ) ನಕಲಿ ಜಾತಿ ಪ್ರಮಾಣ ಪತ್ರ ಪಡೆದವರ ಮೇಲೆ ಇಲಾಖೆ ಅಥವಾ ಪ್ರಾಧಿಕಾರಗಳು ತೆಗೆದುಕೊಂಡ ಕ್ರಮದ ಬಗ್ಗೆ ವರದಿ ನೀಡಿದ್ದಾರೆಯೇ (ವಿವರಗಳನ್ನು ನೀಡುವುದು) ;

(ಇ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ವಿದ್ಯಾಸಿರಿ ಯೋಜನೆಗೆ ಅನುದಾನ ಮೀಸಲಿಡಲಾಗಿದೆಯೇ ; ಮೀಸಲಿಟ್ಟಲ್ಲಿ, ಎಷ್ಟು ;(ವಿವರ ನೀಡುವುದು) ವಿದ್ಯಾಸಿರಿ ಯೋಜನೆಗೆ ಈ ಮೊದಲು ಹಣ ಖರ್ಚು ಮಾಡಲಾಗಿದೆಯೇ ; ಮಾಡಿದ್ದಲ್ಲಿ, ವಿವರ ನೀಡುವುದು ; ಈ ಯೋಜನೆಗೆ ಎಷ್ಟು ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದೆ ; ಆಯ್ಕೆಗೆ ಇರುವ ಮಾನದಂಡಗಳೇನು ; (ಯೋಜನೆಗೊಳಪಟ್ಟು ವಿದ್ಯಾರ್ಥಿಗಳ ಸಂಖ್ಯೆ ಮತ್ತು ಜಾತಿವಾರು ವಿವರ ನೀಡುವುದು) ?

## ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ ಸಾಲ ಪಡೆಯುವುದು.

**ಶ್ರೀ ಬಿ. ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೬೯೧ (೨೧೨೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳಿಗೆ ಸಾಲ ನೀಡುತ್ತಿರುವುದು ನಿಜವೇ ; ನಿಜವಾಗಿದ್ದರೆ, ವಿಧಿಸುವ ಮಾನದಂಡಗಳು ಏನು ; ಎಷ್ಟು ಹಣ ನಿಗದಿಪಡಿಸಲಾಗಿದೆ ;(ವಿವರ ನೀಡುವುದು) ;

(ಆ) ಸಮಾಜ ಕಲ್ಯಾಣ ಇಲಾಖೆ ಮತ್ತು ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು ; ಆ ಕಾರ್ಯಕ್ರಮದಿಂದ ಫಲಾನುಭವಿಗಳು ಯಾವ ರೀತಿ ಪ್ರಯೋಜನ ಪಡೆಯಬಹುದು (ವಿವರ ನೀಡುವುದು) ?

## ಬಿ. ಪಿ. ಎಲ್. ಕಾರ್ಡುಗಳು.

**ಶ್ರೀಮತಿ ವಿಮಲಾಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೬೯೨ (೨೧೨೮) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

ಅ) ರಾಜ್ಯದಲ್ಲಿ ಬಿ. ಪಿ. ಎಲ್. ಕಾರ್ಡುಗಳನ್ನು ವಿತರಣೆ ಮಾಡುವ ಕಾರ್ಯ ಯಾವ ಹಂತದಲ್ಲಿದೆ ; ಈ ಬಗ್ಗೆ ಸಮೀಕ್ಷೆ ಕಾರ್ಯ ಪೂರ್ಣಗೊಂಡಿದೆಯೇ ಹಾಗೂ ಇದರ ಅನ್ವಯ ರಾಜ್ಯದಾದ್ಯಂತ ವಿವಿಧ ಜಿಲ್ಲೆಗಳಲ್ಲಿ ಎಷ್ಟು ಜನ ಅರ್ಹ ಫಲಾನುಭವಿಗಳನ್ನು ಗುರುತಿಸಲಾಗಿದೆ ; (ಜಿಲ್ಲಾವಾರು ಅಂಕಿ ಅಂಶಗಳನ್ನು ಒದಗಿಸುವುದು) ;

(ಆ) ಈ ಸಾಲಿನಲ್ಲಿ ಎಷ್ಟು ಬಿ. ಪಿ. ಎಲ್. ಕಾರ್ಡುಗಳನ್ನು ವಿತರಣೆ ಮಾಡುವ ಗುರಿ ಹೊಂದಲಾಗಿದೆ ; ಕಳೆದ ೧ ವರ್ಷದಲ್ಲಿ ಎಷ್ಟು ಬಿ. ಪಿ. ಎಲ್. ಕಾರ್ಡುಗಳನ್ನು ವಿತರಣೆ ಮಾಡಲಾಗಿದೆ ;

(ಇ) ಮೇಲ್ಕಂಡ ಯೋಜನೆಗೆ ನಿಗದಿಪಡಿಸಲಾದ ಹಣವೆಷ್ಟು ; ಹಾಗೂ ಇಲ್ಲಿಯವರೆಗೆ ಬಿಡುಗಡೆ ಮಾಡಲಾದ ಹಣವೆಷ್ಟು ;

(ಈ) ಆಹಾರ ವಲಯಕ್ಕೆ ಈ ಸಾಲಿನ ಆಯವ್ಯಯದಲ್ಲಿ ಯಾವ ಯಾವ ಯೋಜನೆಗಳಿಗಾಗಿ ಎಷ್ಟೆಷ್ಟು ಹಣವನ್ನು ನಿಗದಿಪಡಿಸಲಾಗಿದೆ ?

## ಸರ್ಕಾರಿ ಆಸ್ಪತ್ರೆಗಳು.

**ಶ್ರೀಮತಿ ವಿಮಲಾಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೬೯೩ (೨೧೨೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಆಸ್ಪತ್ರೆಗಳು ಎಷ್ಟು ;(ಜಿಲ್ಲಾವಾರು ವಿವರ ನೀಡುವುದು) ;

(ಆ) ಈ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು) ;

(ಇ) ಹಾಗಿದ್ದಲ್ಲಿ, ವೈದ್ಯರ ಕೊರತೆ ನೀಗಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಸರ್ಕಾರಿ ಆಸ್ಪತ್ರೆಗಳಲ್ಲಿ ಬಡಜನರಿಗೆ ಉತ್ತಮ ಗುಣಮಟ್ಟದ ಸೇವೆ ಮತ್ತು ಉತ್ತಮ ಔಷಧಿಗಳನ್ನು ನೀಡಲು ಸರ್ಕಾರವು ಕೈಗೊಂಡಿರುವ ಕ್ರಮವೇನು ; (ವಿವರ ನೀಡುವುದು) ?

## ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಲ್ಲಿನ ಬೋಧಕರ ನೇಮಕಾತಿ.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೬೯೪ (೨೧೩೧) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ರಾಜ್ಯದಲ್ಲಿನ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಲ್ಲಿನ ಬೋಧಕರ ನೇಮಕಾತಿ ಸಂಬಂಧ ನೇಮಕಾತಿ ನಿಯಮಗಳನ್ನು (ಸಿ ಅಂಡ್ ಆರ್) ಜಾರಿಗೆ ತರಲಾಗಿದೆಯೇ ; ಸದರಿ ನಿಯಮ ಎಂದಿನಿಂದ ಜಾರಿಯಲ್ಲಿದೆ ;

(ಆ) ಸದರಿ ಬೋಧಕರ ನೇಮಕಾತಿ ನಿಯಮಗಳಲ್ಲಿ ಇರುವ ಅಂಶಗಳೇನು ; (ವಿವರಗಳೊಡನೆ) ?

## ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಬೋಧಕ ಹುದ್ದೆಗಳು.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೬೯೫ (೨೧೩೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ರಾಜ್ಯದಲ್ಲಿನ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಲ್ಲಿ ಯಾವ ವಿಭಾಗದಲ್ಲಿ ಬಡ್ತಿಯಿಂದ ಭರ್ತಿ ಮಾಡಬೇಕಾಗಿರುವ ಎಷ್ಟು ಬೋಧಕ ಹುದ್ದೆಗಳು ಖಾಲಿ ಇವೆ ; (ಕಾಲೇಜುವಾರು, ವಿಭಾಗವಾರು ಮಾಹಿತಿ) ;

(ಆ) ಸದರಿ ಹುದ್ದೆಗಳು ಯಾವ ಸಮಯದಿಂದ ಖಾಲಿ ಇವೆ, ಇಷ್ಟು ಸಮಯದಿಂದ ಖಾಲಿ ಇರಲು ಕಾರಣಗಳೇನು ; (ವಿವರಗಳೊಡನೆ) ;

(ಇ) ಬಡ್ತಿ ಮೂಲಕ ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರಗಳೊಡನೆ) ;

(ಈ) ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಬಡ್ತಿ ಮೂಲಕ ಭರ್ತಿ ಮಾಡಲಾಗುವುದು ?

## ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿನ ಆಂಬುಲೆನ್ಸ್‌ಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೬೯೬ (೨೧೩೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

ಅ) ರಾಜ್ಯದಲ್ಲಿನ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳ ಆಸ್ಪತ್ರೆಗಳಲ್ಲಿ ಎಷ್ಟು ಆಂಬುಲೆನ್ಸ್‌ಗಳಿವೆ (ಕಾಲೇಜುವಾರು ಮಾಹಿತಿ) ;

(ಆ) ಸದರಿ ಆಸ್ಪತ್ರೆಗಳಲ್ಲಿ ಎಷ್ಟು ಆಂಬುಲೆನ್ಸ್‌ಗಳನ್ನು ನಿತ್ಯ ಬಳಕೆ ಮಾಡಲಾಗುತ್ತಿದೆ ; ಎಷ್ಟು ಆಂಬುಲೆನ್ಸ್‌ಗಳು ರಿಪೇರಿಯಲ್ಲಿವೆ ;ಎಷ್ಟು ವಾಹನಗಳು ಸಂಪೂರ್ಣ ನಿಷ್ಕ್ರಿಯವಾಗಿವೆ (ಕಾಲೇಜುವಾರು ಮಾಹಿತಿ) ;

(ಇ) ಸದರಿ ಕಾಲೇಜಿನ ಆಂಬುಲೆನ್ಸ್ ವಾಹನಗಳ ಬಳಕೆಗೆ ಒಂದು ಕಿ. ಮೀ.ಗೆ ರೋಗಿಗಳಿಂದ ಎಷ್ಟು ಮೊತ್ತವನ್ನು ಪಡೆಯಲಾಗುತ್ತಿದೆ (ಕಾಲೇಜುವಾರು ವಿವರಗಳೊಡನೆ) ;

(ಈ) ಸದರಿ ಕಾಲೇಜುಗಳಿಗೆ ಅಗತ್ಯವಿರುವ ಆಂಬುಲೆನ್ಸ್ ವಾಹನಗಳ ಸಂಖ್ಯೆ ಎಷ್ಟು ; ಅಗತ್ಯವಿರುವ ಆಂಬುಲೆನ್ಸ್ ವಾಹನಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಕಾಲೇಜುವಾರು ಮಾಹಿತಿ) ?

## ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೬೯೭ (೨೧೩೩) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ರಾಜ್ಯದಲ್ಲಿರುವ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; ಅವು ಯಾವುವು (ವಿವರಗಳೊಡನೆ) ;

(ಆ) ಸದರಿ ವೈದ್ಯಕೀಯ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರ ಹಾಗೂ 'ಸಿ' ಗುಂಪಿನ ಹುದ್ದೆಗಳ ಸಂಖ್ಯೆ ಎಷ್ಟು (ಕಾಲೇಜುವಾರು, ವರ್ಗಾವಾರು ಮಾಹಿತಿ) ;

(ಇ) ಸದರಿ ಹುದ್ದೆಗಳು ಯಾವ ಸಮಯದಿಂದ ಖಾಲಿ ಇವೆ (ವಿವರಗಳೊಡನೆ) ;

(ಈ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಇದುವರೆವಿಗೆ ಕೈಗೊಂಡಿರುವ ಕ್ರಮಗಳೇನು (ವಿವರಗಳೊಡನೆ) ?

## ಯೋಜನಾ ಇಲಾಖಾ ವಾರ್ಷಿಕ ವರದಿ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೬೯೮ (೨೦೬೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ರಾಜ್ಯದ ಯೋಜನಾ ಇಲಾಖೆಯ ವಾರ್ಷಿಕ ವರದಿ ಅಂದರೆ ೨೦೧೪–೧೫ನೇ ಸಾಲಿನಲ್ಲಿ ಯೋಜನಾವಾರು ಬಿಡುಗಡೆ

ಮಾಡಲಾದ ಅಂಕಿ-ಅಂಶಗಳ ವಿವರ, ಯೋಜನಾವಾರು ಮೊತ್ತ ಹಾಗೂ ವಿವಿಧ ಇಲಾಖೆಗಳ ಯೋಜನೆಗಳ ಪೂರ್ಣ ವಿವರ ನೀಡುವುದು (ಇಲಾಖೆವಾರು ಯೋಜನೆವಾರು ಹಾಗೂ ಲೆಕ್ಕ ಶೀರ್ಷಿಕೆವಾರು ಮಾಹಿತಿ ನೀಡುವುದು) ;

(ಆ) ಈ ವಾರ್ಷಿಕ ಯೋಜನಾ ವರದಿಯಲ್ಲಿ ಯಾವ ಯಾವ ಇಲಾಖೆಗಳು ಯಾವ ಯಾವ ಯೋಜನೆಗಳು ಒಳಪಡುತ್ತವೆ ಎಂದು ಪೂರ್ಣವಾದ ವಿವರವನ್ನು ಇಲಾಖಾವಾರು ನೀಡುವುದು ;

(ಇ) ಸದರಿ ಯೋಜನೆಗಳು ಯಾವ ಯಾವ ವರ್ಷದಲ್ಲಿ ಅಧಿಸೂಚನೆ ಹೊರಡಿಸಲಾಗಿರುತ್ತವೆ (ದಿನಾಂಕವಾರು ಮಾಹಿತಿ ನೀಡುವುದು) ;

(ಈ) ಸದರಿ ಯೋಜನೆಗಳಿಗೆ ಅಂದರೆ ೨೦೧೪-೧೫ನೇ ಸಾಲಿನಲ್ಲಿ ನಿಗದಿಪಡಿಸಲಾದ ಅನುದಾನದ ಮೊತ್ತವೆಷ್ಟು ?

## ತಾಲ್ಲೂಕು ಅಭಿವೃದ್ಧಿ ಅಧಿಕಾರಿ (TDO) ಹುದ್ದೆ ಮಾತ್ರ ಉನ್ನತೀಕರಿಸುತ್ತಿರುವ ಬಗ್ಗೆ.

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೯(೨೧೦೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಡಾ: ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಕೆಲಸ ನಿರ್ವಹಿಸುತ್ತಿರುವ ತಾಲ್ಲೂಕು ಅಭಿವೃದ್ಧಿ ಅಧಿಕಾರಿ (ಟಿ.ಡಿ.ಓ) ಮತ್ತು ಕಛೇರಿ ಅಧೀಕ್ಷಕರು ಎಷ್ಟು ; ಇವರಲ್ಲಿ ಎರವಲು ಸೇವೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವವರೆಷ್ಟು ; (ಹೆಸರು ಮತ್ತು ಎಷ್ಟು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂಬ ಮಾಹಿತಿ ನೀಡುವುದು) ;

(ಆ) ನಿಗಮ ಉಗಮವಾದಾಗ ತಾಲ್ಲೂಕು ಅಭಿವೃದ್ಧಿ ಅಧಿಕಾರಿ (ಟಿ.ಡಿ.ಓ.) ಮತ್ತು ಕಛೇರಿ ಅಧೀಕ್ಷಕ ಹುದ್ದೆಗಳು ಯಾವ ವೃಂದ (ಗ್ರೂಪ್)ದಲ್ಲಿ ಬರುತ್ತವೆ ; ಎರಡೂ ಹುದ್ದೆಗಳಿಗೆ ನಿಗದಿಪಡಿಸಲಾದ ಮೂಲ ವೇತನ ಎಷ್ಟು ;

(ಇ) ತಾಲ್ಲೂಕು ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಮಾತ್ರ 'ಬಿ' ಗ್ರೂಪ್‌ಗೆ ಉನ್ನತೀಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ನಿಯಮಾವಳಿಗಳಡಿಯಲ್ಲಿ ಉನ್ನತೀಕರಿಸಲಾಗುತ್ತಿದೆ ; ಇದಕ್ಕೆ ಸರ್ಕಾರದ ಅನುಮತಿ ಪಡೆಯಲಾಗಿದೆಯೇ ; ತಾಲ್ಲೂಕು ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಉನ್ನತೀಕರಿಸಿದ ನಂತರ ನೀಡುವ ಮೂಲವೇತನ ಎಷ್ಟು ;

(ಈ) ತಾಲ್ಲೂಕು ಅಭಿವೃದ್ಧಿ ಅಧಿಕಾರಿ ಮತ್ತು ಕಛೇರಿ ಅಧೀಕ್ಷಕ ಹುದ್ದೆಗಳೆರಡು ಒಂದೇ ವೃಂದದಲ್ಲಿ ಇದ್ದಾಗ ತಾಲ್ಲೂಕು ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಮಾತ್ರ ಉನ್ನತೀಕರಿಸಲು ಕಾರಣವೇನು ; ಈ ಹುದ್ದೆಯನ್ನು ಉನ್ನತೀಕರಿಸುವುದು ಸಮಂಜಸವೇ ;ಇದಕ್ಕೆ ಆರ್ಥಿಕ ಇಲಾಖೆಯು ಸಮ್ಮತಿಸಿದೆಯೇ ;

(ಉ) ಮೂಲವೇತನ ಹಾಗೂ ವೃಂದ ಬದಲಾವಣೆಯ ಆಸೆಗೆ ಉನ್ನತೀಕರಣಗೊಂಡ ತಾಲ್ಲೂಕು ಅಭಿವೃದ್ಧಿ ಅಧಿಕಾರಿ ನಿರ್ದಿಷ್ಟವಾಗಿ ತಾಲ್ಲೂಕು ಮಟ್ಟದ ಫೀಲ್ಡ್‌ನಲ್ಲಿ ಮಾತ್ರ ಕೆಲಸ ನಿರ್ವಹಿಸುವುದೇ ಅಥವಾ ಕಛೇರಿಯಲ್ಲಿಯೂ ಕೆಲಸ ನಿರ್ವಹಿಸಬಹುದಾಗಿದೆಯೇ ;

(ಊ) ತಾಲ್ಲೂಕು ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಮಾತ್ರ ಉನ್ನತೀಕರಿಸಿದಲ್ಲಿ ಅಧೀಕ್ಷಕ ಹುದ್ದೆಯಲ್ಲಿರುವವರ ಜೇಷ್ಠತೆಯನ್ನು ಹೇಗೆ ನಿರ್ಧರಿಸಲಾಗುತ್ತದೆ ; ವಯೋನಿವೃತ್ತಿಯ ಅಂಚಿನಲ್ಲಿರುವ ಹಾಗೂ ಆರೋಗ್ಯ ತೊಂದರೆಯಿರುವ, ಜೇಷ್ಠತೆಯಲ್ಲಿ ಹಿರಿಯರಾದ ಅಧೀಕ್ಷಕರು ತಾಲ್ಲೂಕು ಅಭಿವೃದ್ಧಿ ಅಧಿಕಾರಿ ಹುದ್ದೆಯ ಬದಲಾವಣೆಗೆ ಸಮ್ಮತಿ ಸೂಚಿಸದೇ ಜೇಷ್ಠತೆಯಲ್ಲಿ ಕಿರಿಯರಾದ ಅಧಿಕ್ಷಕರು ಸಮ್ಮತಿ ಸೂಚಿಸಿ ತಾಲ್ಲೂಕು ಅಭಿವೃದ್ಧಿ ಅಧಿಕಾರಿಯಾಗಿ 'ಬಿ' ಗ್ರೂಪ್‌ಗೆ ಉನ್ನತೀಕರಣಗೊಂಡಾಗ ಹಿರಿಯ ಅಧೀಕ್ಷಕರಿಗೆ ಅನ್ಯಾಯವಾಗುವುದಿಲ್ಲವೇ ; ಈ ಎರಡೂ ಹುದ್ದೆಗಳ ನಡುವೆ ತಾರತಮ್ಯ ಮತ್ತು ಘರ್ಷಣೆ ಸಂಭವಿಸುವುದಿಲ್ಲವೇ ?

## ವಿದ್ಯಾಸಿರಿ ಯೋಜನೆ.

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೭೦೦ (೨೧೦೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಜಿಲ್ಲೆಯಲ್ಲಿ ವಿದ್ಯಾಸಿರಿ ಯೋಜನೆ ಜಾರಿಯಲ್ಲಿದೆಯೇ ;

(ಆ) ಈ ಯೋಜನೆಗೆ ಸೇರ್ಪಡೆಯಾಗಲು ನಿಗದಿಪಡಿಸಿರುವ ಮಾನದಂಡಗಳೇನು ;

(ಇ) ಈವರೆಗೆ ಜಿಲ್ಲೆಯಲ್ಲಿ ಈ ಯೋಜನೆ ಅನ್ವಯ ಎಷ್ಟು ಫಲಾನುಭವಿಗಳನ್ನು ಗುರ್ತಿಸಿ ಪ್ರಯೋಜನ ನೀಡಲಾಗಿದೆ ?

## ಬಿಪಿಎಲ್ ಕಾರ್ಡ್ ವಿತರಣೆ.

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೭೦೧ (೨೧೦೧) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಳ್ಳಾರಿ ಜಿಲ್ಲೆಯಲ್ಲಿ ಎಷ್ಟು ಬಿಪಿಎಲ್ ಕಾರ್ಡ್ ವಿತರಿಸಲಾಗಿದೆ (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಇನ್ನು ಎಷ್ಟು ಜನರು ಬಿಪಿಎಲ್ ಕಾರ್ಡ್‌ಗಾಗಿ ಅರ್ಜಿ ಸಲ್ಲಿಸಿದ್ದಾರೆ ;

(ಇ) ಅರ್ಜಿ ಸಲ್ಲಿಸಿರುವ ಜನರಿಗೆ ಯಾವಾಗ ಕಾರ್ಡ್ ವಿತರಿಸಲಾಗುವುದು ?

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ-2, ಬೆಂಗಳೂರು-59/ಕಾ.ಸೂ. 0 3395/ 1000 ಪ್ರತಿಗಳು/24-7-14